ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ ಮೊದಲನೇ ಖಂಡ ದೀರ್ಘಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೇ ಖಂಡ ದೀರ್ಘಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಹಾರಳ್ಳಿ ರಾಮಸ್ವಾಮಿ (ಕಾನೂನು ಸಚಿವರು) : ಮಾನ್ಯ ಅಧ್ಯಕ್ಷರೇ 1993ರ ಕರ್ನಾಟಕ ಧನವಿನಿಯೋಗ (6ನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ 1993ರ ಕರ್ನಾಟಕ ಧನವಿನಿಯೋಗ (6ನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಪ್ರಕಟಣೆ

ಸಭಾಧ್ಯಕ್ಷರು : ವಿಧಾನ ಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿದೆ. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 114ರ ಮೇರೆಗೆ ವಿಧಾನ ಸಭೆಯಿಂದ ಅಂಗೀಕಾರವಾದ ಈ ಕೆಳಕಂಡ ವಿಧೇಯಕಗಳನ್ನು ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ದಿನಾಂಕ: 16ನೇ ಫೆಬ್ರವರಿ 1994ರಂದು ಅನುಮೋದಿಸಲಾಯಿತೆಂದು ತಿಳಿಸುತ್ತೇನೆ.

1. ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ, 1993.
2. ಕರ್ನಾಟಕ ಸರಕುಗಳ ಪ್ರವೇಶದ ಮೇಲಣ ತೆರಿಗೆ (ಮೂರನೇ ತಿದ್ದುಪಡಿ) ವಿಧೇಯಕ 1993.

ಅಧಿಕೃತ ನಿರ್ಣಯ

ಶ್ರೀ ವಾಟಾಳ್ ನಾಗರಾಜ್ : ಮಾನ್ಯ ಅಧ್ಯಕ್ಷರೇ ಈ ವಿಷಯದಲ್ಲಿ ಬಹಳ ಸುಧೀರ್ಘವಾದ ಚರ್ಚೆ ಆಗಬೇಕಾಗಿದೆ. ಈ ನಿರ್ಣಯ ಅರಣ್ಯವನ್ನು ನಾಶ ಮಾಡತಕ್ಕಂಥಾದ್ದು. ದಯಮಾಡಿ ಈಗ ತೆಗೆದುಕೊಳ್ಳಬೇಡಿ. ತಾವು ಅಂತಹ ಪಾಪದ ಕೆಲಸಕ್ಕೆ ಕೈ ಹಾಕಬೇಡಿ. ಇದರಿಂದ ಇಡೀ ರಾಜ್ಯದ ಅರಣ್ಯ ಸಂಪತ್ತು ಲೂಟಿಯಾಗುತ್ತದೆ. ಖಂಡಿತ ತಾವು ಇಂತಹ ನಿರ್ಣಯ ತರಬೇಡಿ. ಇವರಿಗೆ ಕಾಡು ಬೆಳೆಸತಕ್ಕಂಥ ಯೋಗ್ಯತೆ ಇಲ್ಲ. ದಯವಿಟ್ಟು ಈ ನಿರ್ಣಯವನ್ನು ಈಗ ವಾಪಸ್ಸು ತೆಗೆದುಕೊಳ್ಳಲಿ.

ಉಪಾಧ್ಯಕ್ಷರು : ಅಧಿಕೃತ ನಿರ್ಣಯವನ್ನು ಚರ್ಚೆಗೆ ತೆಗೆದುಕೊಳ್ಳದೆ ಮುಂದೂಡಲಾಗಿದೆ. ಈಗ ನಾನು ಸಭೆಯನ್ನು ಅನಿರ್ದಿಷ್ಟ ಕಾಲದವರೆಗೂ ಮುಂದೂಡುತ್ತೇನೆ.

(ಸಭೆಯು 7-10 ನಿಮಿಷಕ್ಕೆ ಅ ನಿರ್ದಿಷ್ಟ ಕಾಲದವರೆಗೂ ಮುಂದೂಡಲಾಯಿತು)

(+ ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣಗಳನ್ನು ಪರಿಷ್ಕರಿಸಿಲ್ಲ.)